ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ
(ಎರಡನೇ ಅಧಿವೇಶನ)

ಕಾರ್ಯಕಲಾಪಗಳ ಪಟ್ಟಿ

ಬುಧವಾರ, ದಿನಾಂಕ 04ನೇ ಡಿಸೆಂಬರ್, 2013
(ಸಮಯ: ಬೆಳಗ್ಗೆ 10.30 ಗಂಟೆಗೆ)

-----

1. ಶಾಸನ ರಚನೆ

I. ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

1) ಕರ್ನಾಟಕ ಅತ್ಯಾವಶ್ಯಕ ಸೇವೆಗಳ ನಿರ್ವಹಣಾ ವಿಧೇಯಕ, 2013.

ಶ್ರೀ ರಾಮಲಿಂಗಾರೆಡ್ಡಿ (ಸಾರಿಗೆ ಸಚಿವರು) ಅವರು:-

ಅ) 2013ನೇ ಸಾಲಿನ ಕರ್ನಾಟಕ ಅತ್ಯಾವಶ್ಯಕ ಸೇವೆಗಳ ನಿರ್ವಹಣಾ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;
ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

2) ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಯೋಜನೆ ಮತ್ತು ಕೆಲವು ಇತರ ಕಾನೂನುಗಳ (ತಿದ್ದುಪಡಿ) ವಿಧೇಯಕ, 2013.

ಶ್ರೀ ವಿನಯಕುಮಾರ್ ಸೊರಕೆ (ನಗರಾಭಿವೃದ್ಧಿ ಸಚಿವರು) ಅವರು:-

ಅ) 2013ನೇ ಸಾಲಿನ ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಯೋಜನೆ ಮತ್ತು ಕೆಲವು ಇತರ ಕಾನೂನುಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;
ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

3) ಕರ್ನಾಟಕ ಪಂಚಾಯತ್ ರಾಜ್ (ಎರಡನೇ ತಿದ್ದುಪಡಿ) ವಿಧೇಯಕ, 2013
ಶ್ರೀ ಎಚ್. ಕೆ. ಪಾಟೀಲ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) ಅವರು:-

ಅ) 2013ನೇ ಸಾಲಿನ ಕರ್ನಾಟಕ ಪಂಚಾಯತ್ ರಾಜ್ (ಎರಡನೇ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;
ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

ಪು.ತಿ.ನೋ.,

4) **ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯಗಳ (ತಿದ್ದುಪಡಿ) ವಿಧೇಯಕ, 2013**
ಶ್ರೀ ಕೃಷ್ಣ ಭೈರೇಗೌಡ (ಕೃಷಿ ಸಚಿವರು) ಅವರು:-

ಅ) 2013ನೇ ಸಾಲಿನ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯಗಳ(ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;
ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

5) **ಕರ್ನಾಟಕ ಕಲ್ಲುಪುಡಿ ಮಾಡುವ ಘಟಕ (ಕ್ರಷರ್‌ಗಳ) ನಿಯಂತ್ರಣ (ತಿದ್ದುಪಡಿ) ವಿಧೇಯಕ, 2013**
ಶ್ರೀ ಸಿದ್ದರಾಮಯ್ಯ (ಮುಖ್ಯಮಂತ್ರಿಗಳು) ಅವರು:-

ಅ) 2013ನೇ ಸಾಲಿನ ಕರ್ನಾಟಕ ಕಲ್ಲುಪುಡಿ ಮಾಡುವ (ಕ್ರಷರ್‌ಗಳ) ನಿಯಂತ್ರಣ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;
ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

2. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು	:	**ಎಂಟನೇ ಪಟ್ಟಿ**
ಆ) ದಿನಾಂಕ 02.12.2013ರ ಆರನೇ ಪಟ್ಟಿಯಿಂದ ವರ್ಗಾವಣೆಗೊಂಡ ಶ್ರೀ ವಿಶ್ವನಾಥ್ ಈ ಪಾಟೀಲ್ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 76(1414)	:	**ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು**
ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು	:	**ಎಂಟನೇ ಪಟ್ಟಿ**

3. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಶ್ರೀ ಸಿದ್ದರಾಮಯ್ಯ (ಮುಖ್ಯಮಂತ್ರಿಯವರು) ಅವರು:-

(i) ಭಾರತದ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ 2012-13ನೇ ಸಾಲಿನ ಧನವಿನಿಯೋಗ ಲೆಕ್ಕಪತ್ರಗಳು ಹಾಗೂ ಹಣಕಾಸು ಲೆಕ್ಕಪತ್ರಗಳನ್ನು (ಭಾಗ-1 ಮತ್ತು 2) ಸಭೆಯ ಮುಂದಿಡುವುದು.

(ii) ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆ ಕಾಯ್ದೆ 1951ರ ಕಲಂ 37(7)ರ ಮೇರೆಗೆ ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯ 2012-13ನೇ ಸಾಲಿನ ಆಡಿಟ್ ವರದಿಯನ್ನು ಸಭೆಯ ಮುಂದಿಡುವುದು.

ಪು.ತಿ.ನೋ.,

4. ಅರ್ಜಿಯನ್ನೊಪ್ಪಿಸುವುದು

ಶ್ರೀ ಎಂ.ಪಿ. ಅಪ್ಪಚ್ಚು (ರಂಜನ್) (ಸದಸ್ಯರು, ಅರ್ಜಿಗಳ ಸಮಿತಿ) ಅವರು:-

i) ಶ್ರೀ ಗದಗ ಜಿಲ್ಲೆ, ಶಿರಹಟ್ಟಿ ತಾಲ್ಲೂಕಿನ ಬನ್ನಿಕೊಪ್ಪ ಗ್ರಾಮದಿಂದ ಮುರಡಿ ತಾಂಡಾ ಗ್ರಾಮದವರೆಗಿನ ರಸ್ತೆಯನ್ನು ಅಭಿವೃದ್ಧಿಪಡಿಸುವ ಬಗ್ಗೆ.

ii) ಹಿರೇಕೆರೂರು ತಾಲ್ಲೂಕು ಮೈದೂರು ಗ್ರಾಮಪಂಚಾಯತಿಯಲ್ಲಿ ದಾಖಲಾತಿಯನ್ನು ಸೂಕ್ತ ರೀತಿಯಲ್ಲಿ ನಮೂದಿಸುವ ಬಗ್ಗೆ.

iii) ಕಲಘಟಗಿ ತಾಲ್ಲೂಕು ಗಂಜಿಗಟ್ಟಿ ಗ್ರಾಮಕ್ಕೆ ರಸ್ತೆ ಅಭಿವೃದ್ಧಿ ಮತ್ತು ಮೂಲಭೂತ ಸೌಲಭ್ಯವನ್ನು ಒದಗಿಸುವ ಬಗೆಗಿನ ಅರ್ಜಿಗಳನ್ನು ಒಪ್ಪಿಸುವುದು.

5. ಗಮನ ಸೆಳೆಯುವ ಸೂಚನೆಗಳು

1. ಶ್ರೀ ಎಂ.ಟಿ. ಕೃಷ್ಣಪ್ಪ ಅವರು 2012-13ನೇ ಸಾಲಿನ ಸುವರ್ಣ ಗ್ರಾಮ ಮತ್ತು ಸಿ.ಎಂ.ಜಿ.ಎಸ್‌ವೈ ಯೋಜನೆಗಳನ್ನು ಮುಂದುವರಿಸುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

2. ಡಾ॥ ಎ.ಬಿ. ಮಾಲಕರೆಡ್ಡಿ ಅವರು ಭಾರತ ಸಂವಿಧಾನದ ಅನುಚ್ಛೇದ 371 ಜೆ ತಿದ್ದುಪಡಿ ಅನ್ವಯ ಹೈದ್ರಾಬಾದ-ಕರ್ನಾಟಕ ಪ್ರದೇಶದ ಜಿಲ್ಲೆಗಳಲ್ಲಿನ ಖಾಲಿಯಿರುವ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

3. ಶ್ರೀ ಕೆ.ಜಿ.ಬೋಪಯ್ಯ ಅವರು ಸರ್ಕಾರವು ಇತ್ತೀಚಿಗೆ ಕೊಡಗಿನ ಜಮ್ಮಾ ಹಿಡುವಳಿದಾರರಿಗೆ ಇಂಡಿಯನ್ ಆರ್ಮ್ಸ್ ಆಕ್ಟ್ ಪ್ರಕಾರ ಯಾವುದೇ ಪರವಾನಿಗೆ ಇಲ್ಲದೆ ಕೋವಿ ಹಿಡಿಯಲು ಅವಕಾಶ ನೀಡುತ್ತಿರುವುದರಿಂದ ಉಂಟಾಗಿರುವ ಗೊಂದಲದ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

4. ಡಾ॥ ಸಿ.ಎನ್.ಅಶ್ವತ್ಥ್ ನಾರಾಯಣ ಅವರು ರಾಜ್ಯದಲ್ಲಿ ನಕಲಿ ವೈದ್ಯರುಗಳ ಹಾವಳಿ ಹೆಚ್ಚಾಗಿ ರೋಗಿಗಳಿಗೆ ಅತೀವ ತೊಂದರೆಯುಂಟಾಗುತ್ತಿರುವುರಿಂದ ನಕಲಿ ವೈದ್ಯರ ಹಾವಳಿ ತಡೆಗಟ್ಟಲು ಸೂಕ್ತ ಕಾನೂನು ರೂಪಿಸುವ ಬಗ್ಗೆ ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರ ಗಮನ ಸೆಳೆಯುವುದು.

ಮು.ತಿ.ನೋ.,

5. ಶ್ರೀ ಮಾನಪ್ಪ ಡಿ. ವಜ್ಜಲ ಅವರು ಲಿಂಗಸೂಗೂರು ತಾಲ್ಲೂಕಿನಲ್ಲಿ ಫ್ಲೋರೈಡ್‌ಯುಕ್ತ ನೀರು ಸರಬರಾಜು ಆಗುತ್ತಿರುವುದರಿಂದ ಜನರಿಗೆ ತೊಂದರೆಯುಂಟಾಗುತ್ತಿದ್ದು ಅಲ್ಲಿ ಶಾಶ್ವತ ಶುದ್ಧ ಕುಡಿಯುವ ನೀರಿನ ವ್ಯವಸ್ಥೆಯನ್ನು ಕಲ್ಪಿಸುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

6. ಶ್ರೀ ಕೆ.ಎಂ.ಶಿವಲಿಂಗೇಗೌಡ ಅವರು ಅರಸೀಕೆರೆ ತಾಲ್ಲೂಕಿನ ಬಹುಹಳ್ಳಿಗಳಿಗೆ ಕುಡಿಯುವ ನೀರಿನ ಯೋಜನೆಯ ಕಾಮಗಾರಿಗಳನ್ನು ಪ್ರಾರಂಭಿಸದಿರುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

7. ಶ್ರೀ ಅಶೋಕ ಖೇಣಿ ಅವರು ಬೀದರ್ ದಕ್ಷಿಣ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಲ್ಲಿ ಮೂಲಭೂತ ಸೌಲಭ್ಯಗಳ ಕೊರತೆಯಿಂದಾಗಿ ವಿದ್ಯಾರ್ಥಿಗಳಿಗೆ ತೊಂದರೆಯುಂಟಾಗಿರುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

8. ಶ್ರೀ ಮಾನಪ್ಪ ಡಿ. ವಜ್ಜಲ ಅವರು ಲಿಂಗಸೂಗೂರು ತಾಲ್ಲೂಕು ನಂದವಾಡಗಿ ಏತ ನೀರಾವರಿ ಯೋಜನೆಗೆ ಮಂಜೂರಾತಿ ದೊರೆತಿದ್ದರೂ ಸಹ ಇದುವರೆಗೂ ಕಾಮಗಾರಿಯನ್ನು ಪ್ರಾರಂಭಿಸದಿರುವ ಬಗ್ಗೆ ಮಾನ್ಯ ಭಾರೀ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

9. ಶ್ರೀ ಬಿ.ಬಿ. ನಿಂಗಯ್ಯ ಅವರು ಮೂಡಿಗೆರೆ ತಾಲ್ಲೂಕಿನ ಬಾಳೂರು ಹೋಬಳಿಯ ಜಾವಳಿಯಲ್ಲಿ ಭಾರೀ ಮಳೆಯಿಂದಾಗಿ ಹೇಮಾವತಿ ನದಿಗೆ ಕಟ್ಟಲಾಗಿರುವ ಸೇತುವೆಗಳು ಶಿಥಿಲಾವಸ್ಥೆಯಲ್ಲಿರುವುದರಿಂದ ಹಾನಿ ತಪ್ಪಿಸಲು ನದಿಗೆ ತಡೆಗೋಡೆ ನಿರ್ಮಿಸುವ ಬಗ್ಗೆ ಮಾನ್ಯ ಭಾರೀ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

10. ಶ್ರೀ ಕೆ.ಎಸ್. ಮಂಜುನಾಥ್‌ಗೌಡ ಅವರು ಕೋಲಾರ ಜಿಲ್ಲೆಯ ಮಾಲೂರು ತಾಲ್ಲೂಕನ್ನು ಬರಪೀಡಿತ ತಾಲ್ಲೂಕೆಂದು ಘೋಷಿಸುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

11. ಶ್ರೀ ಹಂಪನಗೌಡ ಬಾದರ್ಲಿ ಅವರು ಸಿಂಧನೂರು ಪಟ್ಟಣದಲ್ಲಿ ಹತ್ತಿ ಮತ್ತು ಭತ್ತದ ಖರೀದಿ ಕೇಂದ್ರವನ್ನು ಪ್ರಾರಂಭಿಸುವ ಬಗ್ಗೆ ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರ ಗಮನ ಸೆಳೆಯುವುದು.

12. ಶ್ರೀಯುತರುಗಳಾದ ಕೆ.ಎಸ್. ಮಂಜುನಾಥ್‌ಗೌಡ, ಎಂ.ಕೃಷ್ಣಪ್ಪ ಡಾ॥ ಕೆ.ಎಸ್. ಸುಧಾಕರ್ ಮತ್ತು ಪಿಳ್ಳಮುನಿಶಾಮಪ್ಪ ಅವರುಗಳು ಡಾ॥ ಡಿ.ವಿ. ಗುಂಡಪ್ಪ ಜ್ಞಾನವಾಹಿನಿ ವಿಶ್ವವಿದ್ಯಾಲಯದ ಸ್ಥಾಪನೆ ಬಗ್ಗೆ ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರ ಗಮನ ಸೆಳೆಯುವುದು.

ಮು.ತಿ.ನೋ.,

13. ಶ್ರೀ ಬಸವರಾಜ ರಾಯರೆಡ್ಡಿ ಅವರು 2010-11, 2011-12 ಮತ್ತು 2012-13ರಲ್ಲಿ ಕೊಪ್ಪಳ ಜಿಲ್ಲೆಯ ಯಲಬುರ್ಗಾ ತಾಲ್ಲೂಕಿನ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಇಂಜಿನಿಯರಿಂಗ್ ವಿಭಾಗದಲ್ಲಿ ವಿವಿಧ ಯೋಜನೆಗಳಡಿಯಲ್ಲಿ ಕೈಗೊಳ್ಳಲಾದ ಕಳಪೆ ಕಾಮಗಾರಿ ಮತ್ತು ಹಣ ದುರುಪಯೋಗದ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

14. ಶ್ರೀ ಪಿ.ಆರ್. ಸುಧಾಕರ್‌ಲಾಲ್ ಅವರು ಕೊರಟಗೆರೆ ತಾಲ್ಲೂಕು ಮತ್ತು ತುಮಕೂರು ತಾಲ್ಲೂಕಿನ ಕೋರಾ ಹೋಬಳಿಯನ್ನು ಬರಪೀಡಿತ ಪ್ರದೇಶವೆಂದು ಘೋಷಿಸದಿರುವುದರಿಂದ ಉಂಟಾಗಿರುವ ತೊಂದರೆಯ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

15. ಶ್ರೀ ಅಪ್ಪಾಜಿ ನಾಡಗೌಡ ಅವರು ಬಿಜಾಪುರ ಜಿಲ್ಲೆಯ ಮುದ್ದೇಬಿಹಾಳ ತಾಲ್ಲೂಕು ವ್ಯಾಪ್ತಿಯಲ್ಲಿ ಬರುವ ತಾಳಿಕೋಟೆ ಪಟ್ಟಣದಲ್ಲಿ ನಡೆಯುತ್ತಿರುವ ಒಳಚರಂಡಿ ಕಾಮಗಾರಿಯು ಕಳಪೆ ಮಟ್ಟದ್ದಾಗಿರುವ ಬಗ್ಗೆ ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಸಚಿವರ ಗಮನ ಸೆಳೆಯುವುದು.

16. ಶ್ರೀ ಹೆಚ್.ಡಿ. ರೇವಣ್ಣ ಅವರು ಹೊಳೇನರಸಿಪುರ ತಾಲ್ಲೂಕು ಕಸಬಾ ಹೋಬಳಿಯ ಸರ್ವೇ ನಂಬರ್ 8- ಪಿ 1, ಪಿ 2, ಪಿ 3 ಮತ್ತು ಪಿ 4 ಗಳ ಜಮೀನನ್ನು ಕಾನೂನು ಬಾಹಿರವಾಗಿ ನೋಂದಣಿ ಮಾಡಿರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

17. ಶ್ರೀ ವೈ.ಎನ್ ರುದ್ರೇಶ್‌ಗೌಡ ಅವರು ಹಾಸನ ಜಿಲ್ಲೆಯ ಬೇಲೂರು ತಾಲ್ಲೂಕು ಮಾದೀಹಳ್ಳಿ ಮತ್ತು ಹಳೇಬೀಡು ಹೋಬಳಿಯ ಬರಪೀಡಿತ ಪ್ರದೇಶಗಳ ಜನರಿಗೆ ಶಾಶ್ವತ ಕುಡಿಯುವ ನೀರನ್ನು ಒದಗಿಸಲು ಪ್ರಾರಂಭಿಸಲಾಗಿರುವ ಏತ ನೀರಾವರಿ ಯೋಜನೆ ಕಾಮಗಾರಿಯನ್ನು ಪೂರ್ಣಗೊಳಿಸದಿರುವುದರಿಂದ ಉಂಟಾಗಿರುವ ತೊಂದರೆಯ ಬಗ್ಗೆ ಮಾನ್ಯ ಭಾರೀ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

18. ಶ್ರೀಮತಿ ಶಶಿಕಲಾ ಅಣ್ಣಾಸಾಹೇಬ ಜೊಲ್ಲೆ ಅವರು ನಗರಸಭೆ, ಪುರಸಭೆ, ಮತ್ತು ಪಟ್ಟಣ ಪಂಚಾಯತ್‌ಗಳು ತೆರಿಗೆ ಸಂಗ್ರಹ ಮಾಡುವಲ್ಲಿ ವಿಫಲವಾಗಿರುವ ಬಗ್ಗೆ ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಸಚಿವರ ಗಮನ ಸೆಳೆಯುವುದು.

19 ಶ್ರೀ ಕೆ.ಎಂ.ಶಿವಲಿಂಗೇಗೌಡ ಅವರು ಅರಸೀಕೆರೆ ತಾಲ್ಲೂಕನ್ನು ಬರ ಪರಿಹಾರದಿಂದ ಕೈಬಿಟ್ಟಿರುವುದರಿಂದ ಬೆಳೆ ನಷ್ಟ ಹೊಂದಿರುವ ರೈತರು ಸಂಕಷ್ಟದಲ್ಲಿರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

20. ಶ್ರೀ ಹೆಚ್.ಕೆ. ಕುಮಾರಸ್ವಾಮಿ ಅವರು ಸಕಲೇಶಪುರ ತಾಲ್ಲೂಕಿನ ಹೆತ್ತೂರು ಗ್ರಾಮಕ್ಕೆ ಬಸ್ ಮಂಜೂರಾತಿ ನೀಡುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

ಪು.ತಿ.ನೋ.,

21. ಡಾ॥ ವಿಶ್ವನಾಥ್ ಈ ಪಾಟೀಲ್ ಅವರು ಅನುದಾನಿತ ಶಾಲಾ ಶಿಕ್ಷಕರುಗಳು ಶೈಕ್ಷಣಿಕ ವರ್ಷದ ಮಧ್ಯದಲ್ಲಿ ನಿವೃತ್ತಿಯಾಗುತ್ತಿರುವುದರಿಂದ ಶಾಲೆಗಳಲ್ಲಿ ಬೋಧನೆಗೆ ತೊಂದರೆಯಾಗುತ್ತಿದ್ದು ಅಂತಹ ಶಿಕ್ಷಕರನ್ನು ಮಾರ್ಚ್ ಅಂತ್ಯದವರೆಗೆ ಮುಂದುವರಿಸುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರ ಗಮನ ಸೆಳೆಯುವುದು.

22. ಶ್ರೀ ಎ. ಮಂಜು ಅವರು ಕರ್ನಾಟಕ ಪೋಲೀಸ್ ಮ್ಯಾನ್ಯುಯಲ್ ಪ್ರಕಾರ ಹಿರಿಯ ಸಬ್‌ಇನ್ಸ್‌ಪೆಕ್ಟರ್‌ಗಳನ್ನು ಠಾಣಾಧಿಕಾರಿಗಳನ್ನಾಗಿ ನೇಮಿಸದೆ ಕಿರಿಯರನ್ನು ನೇಮಿಸಿರುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

23. ಶ್ರೀ ಅಪ್ಪಾಜಿ ನಾಡಗೌಡ ಅವರು ಮುದ್ದೇಬಿಹಾಳ ತಾಲ್ಲೂಕಿನ ಆಲಮಟ್ಟಿ ಎಡದಂಡೆ ಕಾಲುವೆ ಹಾಗೂ ಚಿಮ್ಮಲಗಿ ಏತ ನೀರಾವರಿ ಕಾಮಗಾರಿ ಪ್ರಗತಿಯಲ್ಲಿರುವುದರಿಂದ ಕಮಾಂಡ್‌ನಲ್ಲಿ ನೀರು ಬಾರದಿರುವ ಜಮೀನುಗಳ ರೈತರಿಗೆ ನೀರಾವರಿ ಸೌಲಭ್ಯ ದೊರಕದೇ ಇರುವ ಬಗ್ಗೆ ಭಾರೀ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

24. ಶ್ರೀ ಎಸ್.ಆರ್. ವಿಶ್ವನಾಥ ಅವರು ನಿವೇಶನಗಳ ನೋಂದಣಿ ಮಾಡುವ ಬಗೆಗೆ ಇರುವ ನಿಯಮಗಳನ್ನು ಕಟ್ಟುನಿಟ್ಟಾಗಿ ಜಾರಿಗೆ ತರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

25. ಶ್ರೀ ಪಿ.ಆರ್. ಸುಧಾಕರ್ ಲಾಲ್ ಅವರು ಅಂಗವಿಕಲ, ಅಂಧ ಮತ್ತು ಮೂಕ ವಿದ್ಯಾರ್ಥಿಗಳ ವ್ಯಾಸಂಗಕ್ಕಾಗಿ ಜಿಲ್ಲಾಮಟ್ಟದಲ್ಲಿ ವಸತಿ ಶಾಲೆಗಳನ್ನು ಪ್ರಾರಂಭಿಸುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

26. ಶ್ರೀ ಮಾನಪ್ಪ ಡಿ. ವಜ್ಜಲ್ ಅವರು ಲಿಂಗಸುಗೂರು ತಾಲ್ಲೂಕು ಬರಪೀಡಿತ ಪ್ರದೇಶವಾಗಿದ್ದು ಆ ಪ್ರದೇಶದ ಜನರಿಗೆ ಉದ್ಯೋಗಾವಕಾಶ ನೀಡುವ ಸಲುವಾಗಿ ಕೈಗಾರಿಕೆಗಳನ್ನು ಪ್ರಾರಂಭಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

27. ಶ್ರೀ ಜಿ.ಎಸ್. ಪಾಟೀಲ್ ಅವರು ಗದಗ ಜಿಲ್ಲೆ ಮುಂಡರಗಿ ತಾಲ್ಲೂಕಿನ ಸಿಂಗಟಾಲೂರು ಏತ ನೀರಾವರಿ ಯೋಜನೆಯ ಪ್ರಗತಿಯ ಬಗ್ಗೆ ಮಾನ್ಯ ಭಾರೀ ಮತ್ತು ಮಧ್ಯಮ ನೀರಾವರಿ ಸಚಿವರ ಗಮನ ಸೆಳೆಯುವುದು.

28. ಶ್ರೀ ಕೆ.ಜಿ. ಬೋಪಯ್ಯ ಅವರು ಮಲೆನಾಡು ಪ್ರದೇಶಗಳಲ್ಲಿ ಬೀಳುವ ಭಾರೀ ಮಳೆಯಿಂದಾಗಿ ರಸ್ತೆಗಳು ಹಾಳಾಗುತ್ತಿರುವುದರಿಂದ ಸದರಿ ರಸ್ತೆಗಳನ್ನು ಕಾಲಕಾಲಕ್ಕೆ ದುರಸ್ತಿಗೊಳಿಸಲು ಈ ಹಿಂದೆ ನೇಮಕ ಮಾಡಿಕೊಂಡಂತೆ ಗ್ಯಾಂಗ್‌ಮನ್‌ಗಳನ್ನು ಪುನ: ನೇಮಕ ಮಾಡುವ ಬಗ್ಗೆ ಮಾನ್ಯ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.

ಪು.ತಿ.ನೋ.,

29. ಶ್ರೀ ಡಿ.ಬಿ. ಇನಾಂದಾರ್ ಅವರು ಕಿತ್ತೂರು ಹಾಗೂ ಡೊಂಬರಕೊಪ್ಪ ಗ್ರಾಮದ ರೈತರ ಜಮೀನುಗಳನ್ನು ಕೆ.ಐ.ಎ.ಡಿ.ಬಿ.ಯು ವಶಪಡಿಸಿಕೊಂಡಿದ್ದು ಅಂತಹ ರೈತರ ಜಮೀನುಗಳಿಗೆ ಸೂಕ್ತ ಪರಿಹಾರ ಧನ ನೀಡುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

30. ಶ್ರೀ ಸಾ.ರಾ.ಮಹೇಶ್ ಅವರು ಮೈಸೂರು ಜಿಲ್ಲೆ ಕೆ.ಆರ್. ನಗರ ತಾಲ್ಲೂಕಿನ ಹೊಸ ಅಗ್ರಹಾರ ಹೋಬಳಿ ಗುಳೇನಕುಪ್ಪೆ ಗ್ರಾಮದ ರೈತ ಸಾಲಬಾಧೆಯಿಂದ ತಮ್ಮೇಗೌಡ ಅವರು ಆತ್ಮಹತ್ಯೆ ಮಾಡಿಕೊಂಡಿದ್ದರಿಂದ ಆ ಕುಟುಂಬ ವರ್ಗಕ್ಕೆ ಪರಿಹಾರ ನೀಡುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

31. ಶ್ರೀ ಎಂ. ರಾಜಣ್ಣ ಅವರು ರಾಜ್ಯದಲ್ಲಿ ಲೋಕೋಪಯೋಗಿ ಇಲಾಖೆಯ 2013-14ನೇ ಸಾಲಿನ ಯೋಜನೆ ಮತ್ತು ಯೋಜನೇತರ ಅನುದಾನಗಳಡಿಯಲ್ಲಿ ಬಾಕಿ ಉಳಿದಿರುವ ಬಿಲ್‌ಗಳನ್ನು ಪಾವತಿ ಮಾಡಲು ಅನುಸರಿಸುತ್ತಿರುವ ಮಾನದಂಡಗಳ ಬಗ್ಗೆ ಮಾನ್ಯ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.

32. ಶ್ರೀ ಡಿ. ನಾಗರಾಜಯ್ಯ ಅವರು ಹಾಸನ-ಬೆಂಗಳೂರು ರೈಲ್ವೆ ಮಾರ್ಗದ ಕಾಮಗಾರಿಯ ಪ್ರಗತಿಯ ಬಗ್ಗೆ ಮಾನ್ಯ ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಮೂಲಭೂತ ಸೌಕರ್ಯಗಳ ಸಚಿವರ ಗಮನ ಸೆಳೆಯುವುದು.

33. ಶ್ರೀ ಮಲ್ಲಿಕಾರ್ಜುನ ಸಿದ್ದರಾಮಪ್ಪ ಖೂಬಾ ಅವರು ಬೀದರ್ ನಗರದಲ್ಲಿ ಸ್ಮಾರಕಗಳನ್ನು ಸಂರಕ್ಷಿಸುವ ಬಗ್ಗೆ ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರ ಗಮನ ಸೆಳೆಯುವುದು.

34. ಶ್ರೀ ವಿಜಯಾನಂದ ಎಸ್. ಕಾಶಪ್ಪನವರ ಅವರು ಬಾಗಲಕೋಟೆ ಜಿಲ್ಲೆ ಹುನಗುಂದ ತಾಲ್ಲೂಕಿನ 60 ಗ್ರಾಮಗಳಿಗೆ ಕುಡಿಯುವ ನೀರು ಒದಗಿಸುವ ಬಹುಗ್ರಾಮಗಳ ಕುಡಿಯುವ ನೀರಿನ ಯೋಜನೆಯಡಿ ಕೈಗೊಳ್ಳಲಾದ ಕಾಮಗಾರಿಯು ಕಳಪೆಮಟ್ಟದ್ದಾಗಿರುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

35. ಡಾ|| ಕೆ. ಶ್ರೀನಿವಾಸ ಮೂರ್ತಿ ಅವರು ನೆಲಮಂಗಲ ತಾಲ್ಲೂಕು ಸೋಂಪುರ ಗ್ರಾಮದ ಸುತ್ತ-ಮುತ್ತಲಿನ ಜಮೀನುಗಳನ್ನು ಕೆಐಎಡಿಬಿಯು ಕಾನೂನಿಗೆ ವಿರುದ್ಧವಾಗಿ ಭೂ ಸ್ವಾಧೀನಪಡಿಸಿಕೊಂಡಿರುವುದರಿಂದ ರೈತರಿಗೆ ಆಗಿರುವ ತೊಂದರೆಯ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

36. ಶ್ರೀ ವಾಸು ಅವರು ಮೈಸೂರು ನಗರಕ್ಕೆ ನರ್ಮ್ ಯೋಜನೆಯಡಿಯಲ್ಲಿ ಕೈಗೊಳ್ಳಲಾಗುತ್ತಿರುವ ಕಾಮಗಾರಿಗಳಲ್ಲಿ ಅವ್ಯವಹಾರ ನಡೆದಿರುವ ಬಗ್ಗೆ ಮಾನ್ಯ ನಗರಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

ಪು.ತಿ.ನೋ.,

37. ಶ್ರೀ ಬಿ.ಎಸ್. ಯಡಿಯೂರಪ್ಪ ಅವರು ಕಬ್ಬು ಬೆಳೆಗಾರರಿಗೆ ಸರ್ಕಾರವು ಬೆಂಬಲ ಬೆಲೆ ಘೋಷಿಸಿದ್ದನ್ನು ಸಕ್ಕರೆ ಕಾರ್ಖಾನೆ ಮಾಲೀಕರುಗಳು ಆ ಬಗ್ಗೆ ಗೊಂದಲದ ಹೇಳಿಕೆಗಳನ್ನು ನೀಡುತ್ತಿರುವುದರಿಂದ ರೈತರಲ್ಲಿ ಗೊಂದಲ ಉಂಟಾಗಿರುವ ಬಗ್ಗೆ ಮಾನ್ಯ ಸಣ್ಣ ಕೈಗಾರಿಕೆಗಳು, ಮುಜರಾಯಿ ಮತ್ತು ಸಕ್ಕರೆ ಸಚಿವರ ಗಮನ ಸೆಳೆಯುವುದು.

38. ಶ್ರೀ ಬಿ. ಶಿವಣ್ಣ ಅವರು ಆನೇಕಲ್ ತಾಲ್ಲೂಕಿನ ಸೂರ್ಯನಗರದಲ್ಲಿ ಕರ್ನಾಟಕ ಗೃಹ ಮಂಡಳಿಯಿಂದ ನಿರ್ಮಿಸಲಾಗಿರುವ ಮನೆಗಳಿಗೆ ಕುಡಿಯುವ ನೀರನ್ನು ಒದಗಿಸುವ ಬಗ್ಗೆ ಮಾನ್ಯ ವಸತಿ ಸಚಿವರ ಗಮನ ಸೆಳೆಯುವುದು.

39. ಶ್ರೀ ಎಸ್. ಚಿಕ್ಕಮಾದು ಅವರು ಮೈಸೂರು ಜಿಲ್ಲೆಯ ಕೆ.ಆರ್.ನಗರ ತಾಲ್ಲೂಕಿನ ಹಲವಾರು ಗ್ರಾಮಗಳಿಗೆ ಸಂಪರ್ಕ ಕಲ್ಪಿಸುವ ಲಕ್ಷ್ಮಣ ತೀರ್ಥ ನದಿಗೆ ಸಾಗರಘಟ್ಟೆ ಬಳಿ ನಿರ್ಮಿಸಲಾಗುತ್ತಿರುವ ಸೇತುವೆ ನಿರ್ಮಾಣ ಕಾಮಗಾರಿಯನ್ನು ಸ್ಥಗಿತಗೊಳಿಸಿರುವ ಬಗ್ಗೆ ಮಾನ್ಯ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.

40. ಶ್ರೀ ದುರ್ಯೋಧನ ಐಹೊಳೆ ಅವರು ರಾಯಬಾಗ ತಾಲ್ಲೂಕಿನ ತಹಶೀಲ್ದಾರ ಅವರ ಕಛೇರಿಯಲ್ಲಿ ಕಂದಾಯ ದಾಖಲಾತಿಗಳನ್ನು ನೀಡಿದಾಗ ಸರ್ಕಾರಕ್ಕೆ ಜಮೆಯಾಗುವ ಹಣದ ನಕಲಿ ರಶೀದಿಗಳನ್ನು ನೀಡುತ್ತಿರುವುದರಿಂದ ಸರ್ಕಾರದ ಬೊಕ್ಕಸಕ್ಕೆ ನಷ್ಟ ಉಂಟಾಗುತ್ತಿರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

41. ಶ್ರೀ ಗುರು ಪಾಟೀಲ್ ಶಿರವಾಳ ಅವರು ಶಹಾಪುರ ತಾಲ್ಲೂಕು ವ್ಯಾಪ್ತಿಯ ಗ್ರಾಮ ಪಂಚಾಯತ್‌ಗಳಲ್ಲಿ ನಡೆದಿರುವ ಅವ್ಯಹಾರದ ಬಗ್ಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

42. ಶ್ರೀ ಹೆಚ್.ಪಿ. ಮಂಜುನಾಥ ಅವರು ರಾಜ್ಯದ ತಂಬಾಕು ಬೆಳೆಗಾರರಿಗೆ ಮಾರುಕಟ್ಟೆಯಲ್ಲಿ ಸೂಕ್ತ ಬೆಲೆ ಸಿಗದಿರುವುದರಿಂದ ರೈತರು ಸಂಕಷ್ಟದಲ್ಲಿದ್ದು ಅಂತಹ ರೈತರಿಗೆ ಉತ್ತಮ ಬೆಲೆ ದೊರಕಿಸಿಕೊಡುವ ಬಗ್ಗೆ ಮಾನ್ಯ ಕೃಷಿ ಸಚಿವರ ಗಮನ ಸೆಳೆಯುವುದು.

43. ಶ್ರೀ ಟಿ. ವೆಂಕಟರಮಣಯ್ಯ ಅವರು ದೊಡ್ಡಬಳ್ಳಾಪುರ ತಾಲ್ಲೂಕಿನ ಸಾಸಲು ಹೋಬಳಿ ಹೊಸಳ್ಳಿ ಹಳ್ಳಕ್ಕೆ ಚೆಕ್ ಡ್ಯಾಂ ನಿರ್ಮಿಸುವ ಬಗ್ಗೆ ಮಾನ್ಯ ಸಣ್ಣ ನೀರಾವರಿ ಸಚಿವರ ಗಮನ ಸೆಳೆಯುವುದು.

44. ಶ್ರೀ ಕೆ.ಎಂ.ತಿಮ್ಮರಾಯಪ್ಪ ಅವರು ತುಮಕೂರು ಜಿಲ್ಲೆ ಪಾವಗಡ ತಾಲ್ಲೂಕಿನ ಕಸಬಾ ಮತ್ತು ಪಳವಳ್ಳಿಯ ವ್ಯವಸಾಯ ಸೇವಾ ಸಹಕಾರ ಸಂಘಗಳಲ್ಲಿ ಅವ್ಯವಹಾರ ನಡೆದಿರುವ ಬಗ್ಗೆ ಮಾನ್ಯ ಸಹಕಾರ ಸಚಿವರ ಗಮನ ಸೆಳೆಯುವುದು.

45. ಶ್ರೀ ಸಂಭಾಜಿ ಪಾಟೀಲ್ ಅವರು ಬೆಳಗಾವಿಯಲ್ಲಿ ನಡೆದ ರಾಷ್ಟ್ರೀಯ ಕಾಂಗ್ರೆಸ್ ಅಧಿವೇಶನದಲ್ಲಿ ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರು ಅಧ್ಯಕ್ಷತೆ ವಹಿಸಿರುವ ನೆನಪಿಗಾಗಿ ಬೆಳಗಾವಿ ಸಮಗ್ರ ಅಭಿವೃದ್ಧಿಗಾಗಿ ರೂ 5327 ಕೋಟಿ ಅನುದಾನ ನೀಡುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

ಮು.ತಿ.ನೋ.,

46. ಶ್ರೀ ಬಿ.ಬಿ. ನಿಂಗಯ್ಯ ಅವರು ಮೂಡಿಗೆರೆ ತಾಲ್ಲೂಕಿನ ಕಳಸ ಹೋಬಳಿಯ ಶ್ರೀ ಕಳಸೇಶ್ವರ ದೇವಸ್ಥಾನಕ್ಕೆ ಸೇರಿದ ಭೂಮಿಯನ್ನು ಇನಾಂ ಮೀಸಲು ಅರಣ್ಯ ಭೂಮಿಯೆಂದು ಘೋಷಣೆಯಾಗಿರುವುದರಿಂದ ಅಲ್ಲಿನ 6777 ಎಕರೆ ಭೂಮಿಯನ್ನು ಅರಣ್ಯ ಇಲಾಖೆಗೆ ವರ್ಗಾಯಿಸಬೇಕೆಂದು ರಾಜ್ಯದ ಉಚ್ಚನ್ಯಾಯಾಲಯವು ನೀಡಿರುವ ತೀರ್ಪಿನಿಂದಾಗಿ ಸಾಗುವಳಿ ಮಾಡಿಕೊಂಡಿರುವ ರೈತರಿಗೆ ಉಂಟಾಗಿರುವ ತೊಂದರೆಯ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

47. ಶ್ರೀ ರಾಜು ಅಲಗೂರು ಅವರು ಬಿಜಾಪುರ ನಗರದಲ್ಲಿ ವಿಮಾನ ನಿಲ್ದಾಣ ನಿರ್ಮಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

48. ಶ್ರೀ ಎಸ್. ಮಧು ಬಂಗಾರಪ್ಪ ಅವರು ರಾಜ್ಯದ ವೈದ್ಯಕೀಯ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವೈದ್ಯರುಗಳಿಗೆ ಸಮಾನವಾಗಿ ಸರ್ಕಾರಿ ಆಸ್ಪತ್ರೆಗಳ ವೈದ್ಯರಗಳಿಗೆ ವೇತನ ನೀಡುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು.

49. ಶ್ರೀ ಎ.ಮಂಜು ಅವರು ರಾಜ್ಯದ ವಿವಿಧಡೆಯಿರುವ ಕ್ಲಬ್‌ಗಳ ಕಾರ್ಯವೈಖರಿಯ ಬಗ್ಗೆ ವಿಚಾರಣೆ ನಡೆಸಲು ರಚಿತವಾಗಿದ್ದ ಡಾ|| ಹೇಮಚಂದ್ರ ಸಾಗರ ಅವರ ಅಧ್ಯಕ್ಷತೆಯಲ್ಲಿನ ಸದನ ಸಮಿತಿಯು ನೀಡಿರುವ ವರದಿಯ ಶಿಫಾರಸ್ಸನ್ನು ಜಾರಿಗೆ ತರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

50. ಶ್ರೀಯುತರುಗಳಾದ ಕೆ.ಎಂ. ಶಿವಲಿಂಗೇಗೌಡ ಹೆಚ್.ಡಿ. ರೇವಣ್ಣ, ಮತ್ತು ಸಿ.ಎನ್. ಬಾಲಕೃಷ್ಣ ಅವರುಗಳು ಹಾಸನ ಜಿಲ್ಲೆಯ ಸರ್ಕಾರಿ ಕೃಷಿ ಕಾಲೇಜಿನ ಹಂತ 1 ಮತ್ತು 2ರ ಕಾಮಗಾರಿಗಳಿಗಾಗಿ ಅವಶ್ಯಕ ಅನುದಾನ ಬಿಡುಗಡೆಯಾಗದೆ ಕಾಮಗಾರಿಗಳು ಅಪೂರ್ಣಗೊಂಡಿರುವ ಬಗ್ಗೆ ಮಾನ್ಯ ಕೃಷಿ ಸಚಿವರ ಗಮನ ಸೆಳೆಯುವುದು

51. ಡಾ.ಕೆ. ಸುಧಾಕರ್, ಶ್ರೀ ಎಸ್.ಎನ್. ನಾರಾಯಣಸ್ವಾಮಿ ಕೆ.ಎಂ. ಮತ್ತು ಶ್ರೀ ಬಿ.ಎಂ. ನಾಗರಾಜು ಅವರುಗಳು ಬೆಂಗಳೂರು ನಗರದಲ್ಲಿ ಊಟೋಪಚಾರ ಹಾಗೂ ಮನರಂಜನೆಗೆ ನಿಗದಿ ಮಾಡಿರುವ ಸಮಯಾವಕಾಶವನ್ನು ತಡರಾತ್ರಿಯವರೆವಿಗೂ ವಿಸ್ತರಿಸುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು

52. ಶ್ರೀ ಹೆಚ್.ಎಸ್. ಶಿವಶಂಕರ್ ಅವರು ದಾವಣಗೆರೆ ಜಿಲ್ಲೆ ಹರಿಹರ ತಾಲ್ಲೂಕಿನಲ್ಲಿ ಬೈರನಪಾದ ಏತ ನೀರಾವರಿ ಯೋಜನೆಯನ್ನು ಅನುಷ್ಠಾನಗೊಳಿಸುವ ಬಗ್ಗೆ ಮಾನ್ಯ ಸಣ್ಣ ನೀರಾವರಿ ಸಚಿವರ ಗಮನ ಸೆಳೆಯುವುದು

53. ಶ್ರೀ ಈ. ತುಕಾರಾಂ ಅವರು ಬಳ್ಳಾರಿ ಜಿಲ್ಲೆ ಸಂಡೂರು ತಾಲ್ಲೂಕಿನ ರಾಷ್ಟ್ರೀಯ ಹೆದ್ದಾರಿ 63ರ ಕುರೇಕುಪ್ಪ ಗ್ರಾಮದ ಹತ್ತಿರ ತುಂಗಭದ್ರಾ ಕಾಲುವೆಯ ಸೇತುವೆಯು ಸಂಪೂರ್ಣವಾಗಿ ಕುಸಿದಿರುವ ಬಗ್ಗೆ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು

54. ಶ್ರೀ ಬಿ.ಆರ್. ಯಾವಗಲ್ ಅವರು ನರಗುಂದ ಪಟ್ಟಣದ ಒಳಚರಂಡಿ ಯೋಜನೆ ಪೂರ್ಣಗೊಳ್ಳದೆ ಉಂಟಾಗಿರುವ ತೊಂದರೆಯ ಬಗ್ಗೆ ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪ ಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಸಚಿವರ ಗಮನ ಸೆಳೆಯುವುದು

ಪು.ತಿ.ನೋ.,

55. ಶ್ರೀ ಕೆ.ಆರ್. ರಮೇಶ್‌ಕುಮಾರ್ ಮತ್ತು ಶ್ರೀ ಯಶವಂತರಾಯಗೌಡ ವಿ. ಪಾಟೀಲ್ ಅವರುಗಳು ರಾಜ್ಯದಲ್ಲಿನ ಕೂಡುಒಕ್ಕಲಿಗ ಜನಾಂಗದವರನ್ನು ಪ್ರವರ್ಗ-3ಎ ಗುಂಪಿಗೆ ಸೇರ್ಪಡೆಗೊಳಿಸುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುವಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು

56. ಶ್ರೀ ಕೆ.ಬಿ. ಪ್ರಸನ್ನಕುಮಾರ್ ಅವರು ಕೊಳಚೆ ನಿರ್ಮೂಲನ ಮಂಡಳಿಯಿಂದ ಕೊಳಚೆ ಪ್ರದೇಶದಲ್ಲಿರುವ ಮನೆಗಳಿಗೆ ಹಕ್ಕುಪತ್ರ ವಿತರಣೆಯಲ್ಲಿ ಮಾಡುತ್ತಿರುವ ತಾರತಮ್ಯ ಮತ್ತು ವಿಳಂಬದ ಬಗ್ಗೆ ಮಾನ್ಯ ವಸತಿ ಸಚಿವರ ಗಮನ ಸೆಳೆಯುವುದು

57. ಶ್ರೀ ಮಂಕಾಳ ಎಸ್. ವೈದ್ಯ ಅವರು ಉತ್ತರ ಕನ್ನಡ ಜಿಲ್ಲೆ ಹೊನ್ನಾವರ ತಾಲ್ಲೂಕು ಉಪ್ಪೋಣಿ ಗ್ರಾಮ ಪಂಚಾಯ್ತಿ ವ್ಯಾಪ್ತಿಯಲ್ಲಿನ ಮಹಿಮೆ ಗ್ರಾಮದ ಮೆಟ್ಟಿನಗದ್ದೆ ಮಜರೆಯಲ್ಲಿ ವಿದ್ಯುತ್ ಸಂಪರ್ಕ ಕಲ್ಪಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನಸೆಳೆಯುವುದು

58. ಶ್ರೀ ಯು.ಬಿ. ಬಣಕಾರ ಅವರು ರಾಜ್ಯದಲ್ಲಿ ಮರಳು ಅಭಾವದಿಂದ ಕಟ್ಟಡ ಕಾಮಗಾರಿಗಳು ಸ್ಥಗಿತಗೊಂಡಿರುವುದರಿಂದ ಸಾರ್ವಜನಿಕರಿಗೆ ಮತ್ತು ಕಾರ್ಮಿಕರಿಗೆ ತೊಂದರೆಯಾಗುತ್ತಿರುವ ಬಗ್ಗೆ ಮಾನ್ಯ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.

59. ಶ್ರೀ ಕೆ.ಎಂ.ಶಿವಲಿಂಗೇಗೌಡ ಅವರು ಗ್ರಾಮ ಕೋಶದ ರಚನೆ ಕುರಿತು ಸರ್ಕಾರವು ಕೈಗೊಂಡಿರುವ ಕ್ರಮದ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನ ಸೆಳೆಯುವುದು.

6. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1. ಶ್ರೀಯುತರುಗಳಾದ ಹೆಚ್.ಡಿ. ಕುಮಾರಸ್ವಾಮಿ, ಹೆಚ್.ಕೆ. ಕುಮಾರಸ್ವಾಮಿ ಹೆಚ್.ಡಿ.ರೇವಣ್ಣ, ಹೆಚ್.ಸಿ. ಬಾಲಕೃಷ್ಣ, ಎನ್.ಚಲುವರಾಯ ಸ್ವಾಮಿ ಹಾಗೂ ಇತರರು ಕೃಷ್ಣಾ ಜಲ ನ್ಯಾಯಾಧೀಕರಣವು ದಿನಾಂಕ: 30.12.2010ರಂದು ನೀಡಿದ್ದ ಅಂತಿಮ ಐತೀರ್ಪಿನ ವಿರುದ್ಧ ಸಲ್ಲಿಸಿದ್ದ ಸ್ಪಷ್ಟೀಕರಣ ಅರ್ಜಿಯ ಮೇಲೆ ದಿನಾಂಕ: 29.11.2013ರಂದು ನ್ಯಾಯಾಧೀಕರಣವು ನೀಡಿದ ಆದೇಶದ ಬಗ್ಗೆ

ಮತ್ತು

ಶ್ರೀಯುತರುಗಳಾದ ಜಗದೀಶ ಶೆಟ್ಟರ, ಬಸವರಾಜ ಬೊಮ್ಮಾಯಿ, ಬಾಲಚಂದ್ರ ಜಾರಕಿಹೊಳಿ, ರಮೇಶ ಬಿ. ಭೂಸನೂರ ಹಾಗೂ ಇತರರು ಕೃಷ್ಣ ಮೇಲ್ದಂಡೆ ಯೋಜನೆಯ ಕಾಮಗಾರಿಯು ನಿಧಾನಗತಿಯಲ್ಲಿ ಸಾಗುತ್ತಿರುವುದರ ಬಗ್ಗೆ

ಮತ್ತು

ಶ್ರೀ ಬಿ.ಎಸ್. ಯಡಿಯೂರಪ್ಪ ಅವರು, ಕೃಷ್ಣಾ ನ್ಯಾಯಾಧಿಕರಣವು ದಿನಾಂಕ: 29.11.2013ರಂದು ನೀಡಿರುವ ತೀರ್ಪಿನ ಬಗ್ಗೆ ಚರ್ಚೆ.

2. ಶ್ರೀಯುತರುಗಳಾದ ಹೆಚ್.ಡಿ. ಕುಮಾರಸ್ವಾಮಿ, ಕೆ.ಎಂ.ಶಿವಲಿಂಗೇಗೌಡ ಹೆಚ್.ಡಿ.ರೇವಣ್ಣ, ಕೆ.ಗೋಪಾಲಯ್ಯ ಹಾಗೂ ಇತರರು ಬೆಂಗಳೂರು ಉತ್ತರ ತಾಲ್ಲೂಕು ಕಸಬಾ ಹೋಬಳಿ ನಾಗಶೆಟ್ಟಿಹಳ್ಳಿ ಹಾಗೂ ಭೂಪಸಂದ್ರ ಗ್ರಾಮದ ಕರ್ನಾಟಕ ಹಾಲು ಮಹಾಮಂಡಳಿಗೆ ಸೇರಿದ ಆಸ್ತಿಯನ್ನು ಭೂ ಮಾಫಿಯಾದೊಂದಿಗೆ ಶಾಮೀಲಾಗಿ ಸುಳ್ಳು ದಾಖಲೆಯನ್ನು ಸೃಷ್ಟಿಸಿ ಸರ್ಕಾರವನ್ನು ವಂಚಿಸುತ್ತಿರುವ ಬಗ್ಗೆ ಚರ್ಚೆ.

3. ಶ್ರೀಯುತರುಗಳಾದ ಹೆಚ್.ಡಿ. ಕುಮಾರಸ್ವಾಮಿ, ಕೆ.ಎಂ.ಶಿವಲಿಂಗೇಗೌಡ ಹೆಚ್.ಡಿ.ರೇವಣ್ಣ, ಕೆ.ಗೋಪಾಲಯ್ಯ ಹಾಗೂ ಇತರರು ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ಬಹುಹಳ್ಳಿಗಳ ಕುಡಿಯುವ ನೀರು ಯೋಜನೆಗೆ ಹಣ ಬಿಡುಗಡೆಯಾಗಿದ್ದರೂ ಆ ಹಣ ಬಳಸಿಕೊಳ್ಳದೇ ಇರುವುದರಿಂದ ಗ್ರಾಮಾಂತರ ಪ್ರದೇಶಗಳಲ್ಲಿ ಕುಡಿಯುವ ನೀರಿಗೆ ತೊಂದರೆಯಾಗಿರುವ ಬಗ್ಗೆ ಚರ್ಚೆ.

4. ಶ್ರೀಯುತರುಗಳಾದ ಜಗದೀಶ ಶೆಟ್ಟರ, ಗೋವಿಂದ ಎಂ.ಕಾರಜೋಳ, ಎಸ್. ಸುರೇಶ್ ಕುಮಾರ್, ವಿಶ್ವೇಶ್ವರ ಹೆಗಡೆ ಕಾಗೇರಿ, ಮತ್ತು ಲಕ್ಷ್ಮಣ ಸವದಿ ಹಾಗೂ ಇತರರು ರಾಜ್ಯದಲ್ಲಿ ಇತ್ತೀಚೆಗೆ ಜಾನುವಾರುಗಳು ಕಾಲುಬಾಯಿ ರೋಗಕ್ಕೆ ತುತ್ತಾಗಿ ಸಾವನ್ನಪ್ಪುತ್ತಿರುವುದರಿಂದ, ಕಾಲುಬಾಯಿ ರೋಗ ತಡೆಗೆ ಸರ್ಕಾರವು ಅಗತ್ಯ ಕ್ರಮಕೈಗೊಳ್ಳುವ ಮತ್ತು ಸೂಕ್ತ ಪರಿಹಾರ ನೀಡುವ ಬಗ್ಗೆ ಚರ್ಚೆ.

5. ಶ್ರೀ ಜೆ.ಆರ್.ಲೋಬೊ, ಶ್ರೀಮತಿ ಶಕುಂತಲಾ ಟಿ. ಶೆಟ್ಟಿ ಮತ್ತು ಬಿ.ಎ. ಮೊಹಿದ್ದೀನ್ ಬಾವಾ ಅವರುಗಳು, ಮಂಗಳೂರು ವಿಶ್ವವಿದ್ಯಾನಿಲಯದ ಪ್ರೊಫೆಸರ್, ಸಹ ಪ್ರೊಫೆಸರ್ ಮತ್ತು ಸಹಾಯಕ ಪ್ರೊಫೆಸರುಗಳ ನೇಮಕಾತಿಯಲ್ಲಿ ನಡೆದ ಅವ್ಯಹಾರದ ಬಗ್ಗೆ ಚರ್ಚೆ.

6. ಶ್ರೀಯುತರುಗಳಾದ ಆರ್.ಅಶೋಕ, ವಿ.ಸುನೀಲಕುಮಾರ್, ಸಿ.ಟಿ.ರವಿ ಮತ್ತು ಬಿ.ಎನ್. ವಿಜಯಕುಮಾರ ಅವರುಗಳು ರಾಜ್ಯದಲ್ಲಿ ಬ್ಯಾಂಕ್-ಎ.ಟಿ.ಎಂ ಗಳಲ್ಲಿ ಹಾಗೂ ವಿವಿಧೆಡೆ ನಡೆಯುತ್ತಿರುವ ಹಲ್ಲೆ, ದರೋಡೆ ಮತ್ತು ಕೋಮು ಹಿಂಸಾಚಾರ ಘಟನೆಗಳು ಸೇರಿದಂತೆ ರಾಜ್ಯದಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಹದಗೆಟ್ಟಿರುವ ಬಗ್ಗೆ ಚರ್ಚೆ.

7. ಶ್ರೀಯುತರುಗಳಾದ ಹೆಚ್.ಡಿ. ಕುಮಾರಸ್ವಾಮಿ, ಹೆಚ್.ಡಿ. ರೇವಣ್ಣ, ಜಿ.ಟಿ. ದೇವೇಗೌಡ, ಎನ್. ಚಲುವರಾಯ ಸ್ವಾಮಿ ಮತ್ತು ಮಧು ಬಂಗಾರಪ್ಪ ಹಾಗೂ ಇತರರು ರಾಜ್ಯದ ಸರ್ಕಾರಿ ಆಸ್ಪತ್ರೆಗಳಿಗೆ ಕಳಪೆ ಗುಣಮಟ್ಟದ ಔಷಧಿಗಳ ಸರಬರಾಜಿನಿಂದಾಗಿ ರೋಗಿಗಳಿಗೆ ತೊಂದರೆಯಾಗಿರುವ ಬಗ್ಗೆ ಚರ್ಚೆ.

8. ಶ್ರೀಯುತರುಗಳಾದ ಬಸವರಾಜ ಬೊಮ್ಮಾಯಿ, ಲಕ್ಷ್ಮಣ ಸಂಗಪ್ಪ ಸವದಿ, ಭರಮಗೌಡ ಆಲಗೌಡ ಕಾಗೆ ಅವರುಗಳು ಕೇಂದ್ರ ಸರ್ಕಾರದ ನೀರಾವರಿ ಇಲಾಖೆಯು ಎಐಬಿಪಿ ಹೊಸ ನಿಯಮಗಳನ್ನು ಜಾರಿಗೆ ತಂದಿದ್ದು ನಮ್ಮ ರಾಜ್ಯದಲ್ಲಿ ಈಗಾಗಲೇ ಎಐಬಿಪಿ ಅಡಿಯಲ್ಲಿರುವ ಯೋಜನೆಗಳು ಹಾಗೂ ಹೊಸದಾಗಿ ಸೇರ್ಪಡೆಯಾಗಿರುವ ಯೋಜನೆಗಳನ್ನು ಇ.ಆರ್.ಎಂ. ಮತ್ತು ಕಾಡಾ ಸ್ಕೀಂಗಳಡಿಯಲ್ಲಿ ಬಳಸಬಹುದಾದ ಪರಿಣಾಮಗಳ ಬಗ್ಗೆ ಚರ್ಚೆ.

ಪು.ತಿ.ನೋ.,

9. ಶ್ರೀಯುತರುಗಳಾದ ಎಸ್.ಮಧುಬಂಗಾರಪ್ಪ, ಕೆ.ಎಂ.ಶಿವಲಿಂಗೇಗೌಡ, ಸಿ.ಎನ್.ಬಾಲಕೃಷ್ಣ, ಬಿ.ಬಿ. ನಿಂಗಯ್ಯ ಹಾಗೂ ಇತರರು ರಾಜ್ಯದ ಅರಣ್ಯ ಜಮೀನುಗಳಲ್ಲಿ ಬಗರ್‌ಹುಕುಂ ಸಾಗುವಳಿ ಮಾಡುತ್ತಿರುವ ರೈತರಿಗೆ ಹಾಗೂ ಅರಣ್ಯವಾಸಿಗಳಿಗೆ ಹಕ್ಕುಗಳನ್ನು ಮಾನ್ಯ ಮಾಡುವ ಸಲುವಾಗಿ ಅಧಿನಿಯಮ 2006, 2008 ಹಾಗೂ 2012ರ ಕಾಯ್ದೆ ಅನ್ವಯ ಗ್ರಾಮ ಸಮಿತಿಗಳನ್ನು ರಚಿಸಲು ಹಾಗೂ ಬಗರ್‌ಹುಕುಂ ಸಾಗುವಳಿದಾರರಿಗೆ ಹಕ್ಕುಪತ್ರಗಳನ್ನು ವಿಸ್ತರಿಸುವ ಬಗ್ಗೆ ಚರ್ಚೆ.

10. ಶ್ರೀಯುತರುಗಳಾದ ಡಾ|| ಕೆ. ಸುಧಾಕರ, ಬಿ.ಎಂ.ನಾಗರಾಜ್, ಎಸ್.ಎನ್. ಸುಬ್ಬಾರೆಡ್ಡಿ, ಎಸ್.ಎನ್. ನಾರಾಯಣಸ್ವಾಮಿ ಹಾಗೂ ಇತರರು ಚಿಕ್ಕಬಳ್ಳಾಪುರ ಜಿಲ್ಲೆ ನಂದಿ ಹೋಬಳಿಯ ನೆಲಮಾಕಲಹಳ್ಳಿ ಗ್ರಾಮಗಳಲ್ಲಿ ಜವಳಿ ಪಾರ್ಕ್ ನಿರ್ಮಿಸಲು ಮಂಜೂರು ಮಾಡಲಾದ 84 ಎಕರೆ ಭೂಮಿಯನ್ನು ಕೃಷಿ ವಿಶ್ವವಿದ್ಯಾಲಯಕ್ಕೆ ಹಸ್ತಾಂತರಿಸಲು ಸರ್ಕಾರವು ತೀರ್ಮಾನ ತೆಗೆದುಕೊಂಡಿರುವುದರ ಬಗ್ಗೆ ಚರ್ಚೆ.

11. ಶ್ರೀಯುತರುಗಳಾದ ಬಸವರಾಜ ಬೊಮ್ಮಾಯಿ, ಲಕ್ಷ್ಮಣ ಸವದಿ, ಭರಮಗೌಡ ಕಾಗೆ, ಸಿ.ಟಿ.ರವಿ, ಹಾಗೂ ಡಿ.ಎನ್. ಜೀವರಾಜ್ ಅವರುಗಳು ಕೇಂದ್ರ ಸರ್ಕಾರವು ಪಶ್ಚಿಮಘಟ್ಟ ಪರಿಸರ ಹಾಗೂ ಅರಣ್ಯ ರಕ್ಷಣೆಗಾಗಿ ಹೊರಡಿಸಿದ ಆದೇಶದಿಂದ ರಾಜ್ಯದ ಪಶ್ಚಿಮಘಟ್ಟ ಪ್ರದೇಶಗಳಲ್ಲಿ ವಾಸಿಸುತ್ತಿರುವ ಜನರ ಮೇಲೆ ಆಗುತ್ತಿರುವ ಪರಿಣಾಮಗಳ ಬಗ್ಗೆ ಚರ್ಚೆ.

12. ಶ್ರೀಯುತರುಗಳಾದ ಕೆ.ಬಿ. ಪ್ರಸನ್ನ ಕುಮಾರ್, ಪ್ರಿಯಾಂಕ ಖರ್ಗೆ, ಶಾರದಾ ಪೂರ್ಯ ನಾಯಕ ಅವರುಗಳು ಶಿವಮೊಗ್ಗ ಮತ್ತು ಗುಲಬರ್ಗಾ ನಗರಗಳಲ್ಲಿ ನಡೆಯುತ್ತಿದ್ದ ವಿಮಾನ ನಿಲ್ದಾಣ ಕಾಮಗಾರಿಯನ್ನು ಸ್ಥಗಿತಗೊಳಿಸಿರುವ ಬಗ್ಗೆ ಚರ್ಚೆ.

13. ಶ್ರೀಯುತರುಗಳಾದ ಕೆ.ಎಸ್. ಪುಟ್ಟಣ್ಣಯ್ಯ, ಅಶೋಕ ಖೇಣಿ ಮತ್ತು ಯು.ಬಿ. ಬಣಕಾರ ಅವರುಗಳು ಉತ್ತರ ಕರ್ನಾಟಕ ಸಮಗ್ರ ಅಭಿವೃದ್ಧಿಯ ಬಗ್ಗೆ ಚರ್ಚೆ.

14. ಶ್ರೀಯುತರುಗಳಾದ ಹೆಚ್.ಡಿ. ಕುಮಾರಸ್ವಾಮಿ, ಹೆಚ್.ಕೆ. ಕುಮಾರಸ್ವಾಮಿ, ಬಿ.ಬಿ.ನಿಂಗಯ್ಯ, ವೈ.ಎಸ್.ವಿ.ದತ್ತಾ ಮತ್ತು ಎಸ್. ಮಧು ಬಂಗಾರಪ್ಪ ಅವರುಗಳು ಚಿಕ್ಕಮಗಳೂರು ಶಿವಮೊಗ್ಗ ಮತ್ತು ಕೊಡುಗು ಜಿಲ್ಲೆಗಳಲ್ಲಿ ಅಕಾಲಿಕ ಭಾರೀ ಮಳೆಯುಂಟಾದ ಹಿನ್ನಲೆಯಲ್ಲಿ ಕಾಫೀ ಏಲಕ್ಕಿ ಮತ್ತು ಮೆಣಸಿನ ಬೆಳೆಗಳು ನಾಶವಾಗಿರುವುದರಿಂದ ರೈತರಿಗೆ ನಷ್ಟವುಂಟಾಗಿದ್ದು ಅಂತಹ ರೈತರಿಗೆ ಸೂಕ್ತ ಪರಿಹಾರ ನೀಡುವ ಬಗ್ಗೆ ಚರ್ಚೆ.

15. ಶ್ರೀಯುತರುಗಳಾದ ಬಿ.ಸುರೇಶ್‌ಗೌಡ ಮತ್ತು ಡಾ|| ರಫೀಕ್ ಅಹ್ಮದ್ ಎಸ್ ಅವರುಗಳು ಹೇಮಾವತಿ ಜಲಾಶಯದಿಂದ ತುಮಕೂರು ಬ್ರಾಂಚ್ ಕೆನಾಲ್‌ಗೆ ಹಂಚಿಕೆಯಾಗಿರುವ ಬಾಕಿ ನೀರನ್ನು ವರ್ಷದಲ್ಲಿ 8 ತಿಂಗಳು ಹರಿಸಲು ಕ್ರಮ ಕೈಗೊಳ್ಳುವ ಬಗ್ಗೆ ಚರ್ಚೆ.

ಪಿ.ಓಂಪ್ರಕಾಶ
ಕಾರ್ಯದರ್ಶಿ

Raj N

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
(www.kar.nic.in/kla)